187

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಾಜೇಂದ್ರ ರಾಜಣ್ಣ ಇವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

ವಿಷಯ:-

ಕೇಂದ್ರ ಸರ್ಕಾರವು ಪರಿಶಿಷ್ಟ ಪಂಗಡದ ಜನಾಂಗದವರಿಗೆ ಮೀಸಲಾತಿ ಪ್ರಮಾಣವನ್ನು ಶೇ.3 ರಿಂದ 7.5ಕ್ಕೆ ಹೆಚ್ಚಿಸಿದ್ದು, ಕರ್ನಾಟಕದಲ್ಲೂ ಸಹ ಈ ವರ್ಗದವರ ಶಿಕ್ಷಣ ಮತ್ತು ಉದ್ಯೋಗಕ್ಕೆ ಅನುಕೂಲವಾಗುವಂತೆ ಮೀಸಲಾತಿ ಪ್ರಮಾಣವನ್ನು ಶೇ.3 ರಿಂದ 7.5ಕ್ಕೆ ಹೆಚ್ಚಿಸಿ ಕೂಡಲೇ ಆದೇಶ ಹೊರಡಿಸಬೇಕೆನ್ನುವ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರನ್ನು ಗಮನ ಸೆಳೆಯಬಯಸುತ್ತೇನೆ.

*******

ಉತ್ತರ:-

ಪರಿಶಿಷ್ಟ ಪಂಗಡದ ಜನರ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯನ್ನು ಹೆಚ್ಚಿಸುವ ಕುರಿತಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ.ಹೆಚ್.ಎನ್.ನಾಗಮೋಹನದಾಸ್ ಇವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಆಯೋಗವು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ.

ಈ ಮಧ್ಯೆ, ಕುರುಬ ಸಮುದಾಯದವರು ಪ್ರಸ್ತುತ ಹಿಂದುಳಿದ ವರ್ಗಗಳ ಪ್ರವರ್ಗ 2ಎ ದಿಂದ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೋರಿರುತ್ತಾರೆ. ಪಂಚಮಸಾಲಿ ಲಿಂಗಾಯಿತ ಸಮುದಾಯದವರು ಹಿಂದುಳಿದ ವರ್ಗಗಳ ಪ್ರವರ್ಗ 3ಬಿ ಯಿಂದ ಪ್ರವರ್ಗ 2ಎಗೆ ವರ್ಗಾಯಿಸಲು ಒತ್ತಾಯಿಸುತ್ತಿದ್ದಾರೆ. ಅದೇ ರೀತಿ ವೀರಶೈವ ಲಿಂಗಾಯಿತರು ಮತ್ತು ಒಕ್ಕಲಿಗ ಸಮುದಾಯದವರು ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಪಟ್ಟಿ (OBC) ಗೆ ಸೇರಿಸಲು ಕೋರಿರುತ್ತಾರೆ.

ಮೇಲ್ಕಂಡ ಸಮುದಾಯಗಳ ಬೇಡಿಕೆಗಳ ಬಗ್ಗೆ ಮತ್ತು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎನ್.ನಾಗಮೋಹನ್‌ದಾಸ್ ರವರು ಸಲ್ಲಿಸಿರುವ ವರದಿಯನ್ನು ಅನುಷ್ಠಾನ ಮಾಡುವ ವಿಧಿ-ವಿಧಾನದ ಬಗ್ಗೆ ಪರಾಮರ್ಶಿಸಿ ಸರ್ಕಾರಕ್ಕೆ ವರದಿ ನೀಡಲು ದಿನಾಂಕ:10.03.2021 ರಂದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಸುಭಾಷ್ ಆಡಿ ರವರ ಅಧ್ಯಕ್ಷತೆಯಲ್ಲಿ ತ್ರಿಸದಸ್ಯರ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಆದ್ದರಿಂದ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಸುಭಾಷ ಆಡಿ ರವರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯು ವರದಿ ಸಲ್ಲಿಸಿದ ನಂತರ ಸರ್ಕಾರದ ಮಟ್ಟದಲ್ಲಿ ಸೂಕ್ತ ನಿರ್ಣಯ ತೆಗೆದುಕೊಳ್ಳಲಾಗುವುದು.

ಸಕಇ 227 ಎಸ್‌ಟಿಪಿ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು.